ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

17

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತು

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE 7/12/20

# ಚೇರ್ಮನ್ ಪದಚ್ಯುತಿ ಸನ್ನಿಹಿತ

**ಬೆಂಗಳೂರು :** ವಿಧಾನಮಂಡಲದ ಚಳಿಗಾಲದ ಅಧಿವೇಶನಕ್ಕೆ ಕ್ಷಣಗಣನೆ ಆರಂಭವಾಗಿರುವ ಹೊತ್ತಿನಲ್ಲೇ ಮೇಲ್ಮನೆ ಚೇರ್ಮನ್ ಬದಲಾವಣೆಗೆ ಕಾಲ ಸನ್ನಿಹಿತವಾಗಿದೆ. ಸದನದ ಕಲಾಪಗಳ ನಿರ್ವಹಣೆಗೆ ಸಂಬಂಧಿಸಿದಂತೆ ಮೇಲ್ಮನೆ ಸಭಾಪತಿ ಪ್ರತಾಪ್‌ಚಂದ್ರ ಶೆಟ್ಟಿ ಅವರ ವಿರುದ್ಧ ಹಕ್ಕುಚ್ಯುತಿ ಮಂಡಿಸಲು ಆಡಳಿತಾರೂಢ ಬಿಜೆಪಿ ಮತ್ತು ವಿಪಕ್ಷ ಜೆಡಿಎಸ್ ತೆರೆಮರೆಯಲ್ಲಿ ಸಿದ್ಧತೆ ನಡೆಸಿವೆ.



ಸದನದ ಆರಂಭದ ದಿನವೇ ಹಕ್ಕುಚ್ಯುತಿ ಮಂಡಿತವಾಗುವ ಸಾಧ್ಯತೆಗಳಿದ್ದು ಪ್ರತಾಪ್‌ಚಂದ್ರ ಶೆಟ್ಟಿ ಅವರ ಸ್ಥಾನಪಲ್ಲಟ ಬಹುತೇಕ ನಿಶ್ಚಿತ ಎನ್ನಲಾಗಿದೆ. ಹಾಗೆ ತೆರವಾಗಲಿರುವ ಸಭಾಪತಿ ಸ್ಥಾನದ ಮೇಲೆ ಬಿಜೆಪಿ ಮತ್ತು ಜೆಡಿಎಸ್‌ನ ಹಿರಿಯ ಸದಸ್ಯರು ಕಣ್ಣಿಟ್ಟಿದ್ದಾರೆ.

ಮೇಲ್ಮನೆಯ ಆಡಳಿತ ಪಕ್ಷದ ಸಭಾನಾಯಕರಾಗಿರುವ ಸಚಿವ ಕೋಟಾ ಶ್ರೀನಿವಾಸ ಪೂಜಾರಿ ಅವರನ್ನು ಸಭಾಪತಿ ಮಾಡಲು ಪ್ರಯತ್ನ ನಡೆದಿತ್ತಾದರೂ ಇದೀಗ ಅದು ಹಿಂಬದಿಗೆ ಸರಿದಿದೆ. ಮೇಲ್ಮನೆಯ ಹಿರಿಯ ಸದಸ್ಯರಾಗಿರುವ ಬಸವರಾಜ ಹೊರಟ್ಟಿ ಅವರನ್ನು ಸರ್ವಸಮ್ಮತ ಅಭ್ಯರ್ಥಿಯಾಗಿಸುವ ಪ್ರಯತ್ನ ನಡೆದಿದ್ದು ಈ ಸಂಬಂಧ ಉಭಯ ಪಕ್ಷಗಳ ನಡುವೆ ಮಾತುಕತೆಯೂ ನಡೆದಿದೆ.

2022ರವರೆಗೂ ಮೇಲ್ಮನೆಯ ಯಾವ ಸ್ಥಾನಕ್ಕೂ ಚುನಾವಣೆ ನಡೆಯದಿರುವುದರಿಂದ 22ಕ್ಕೆ ಬಸವರಾಜ ಹೊರಟ್ಟಿ ಅವರ ಸದಸ್ಯ ಅವಧಿಯು ಪೂರ್ಣಗೊಳ್ಳುವುದರಿಂದ ಅವರನ್ನೇ ಸಭಾಪತಿ ಸ್ಥಾನದಲ್ಲಿ ಕೂರಿಸಬೇಕೆಂಬ ಚಿಂತನೆ ಬಲವಾಗಿದೆ.

ಈ ಸಂಬಂಧ ಬಿಜೆಪಿ ಮತ್ತು ಜೆಡಿಎಸ್ ನಡುವೆ 'ಅನಧಿಕೃತ' ಮೈತ್ರಿ ಏರ್ಪಟ್ಟಿದ್ದು ಸಭಾಪತಿ ಸ್ಥಾನ ಜೆಡಿಎಸ್‌ಗೆ ಬಿಟ್ಟುಕೊಡಲಿರುವ ಬಿಜೆಪಿ ಉಪಸಭಾಪತಿ ಸ್ಥಾನವನ್ನು ಅಲಂಕರಿಸಲಿದೆ ಎಂದು ತಿಳಿದುಬಂದಿದೆ.

ಈ ಒಪ್ಪಂದದನ್ವಯ ಹಿರಿಯ ಸದಸ್ಯ ಬಸವರಾಜ ಹೊರಟ್ಟಿ ಅವರಿಗೆ ಸಭಾಪತಿ ಸ್ಥಾನ ದೊರೆಯುವುದು ಬಹುತೇಕ ಖಚಿತವಾಗಿದ್ದು ಹೊರಟ್ಟಿ ಅವರ ಬಹುದಿನಗಳ ಬಯಕೆಗೆ ರೆಕ್ಕೆಪುಕ್ಕ ಬಂದಿದೆ. ಉಪಸಭಾಪತಿ ಸ್ಥಾನಕ್ಕೆ ಬಿಜೆಪಿಯಲ್ಲಿ ಪೈಪೋಟಿ ಏರ್ಪಟ್ಟಿದ್ದು ವೈ.ಎ.ನಾರಾಯಣಸ್ವಾಮಿ ಅವರ ಹೆಸರು ಬಲವಾಗಿ ಕೇಳಿಬರುತ್ತಿದ್ದರೂ ಹಾಲಿ ಸಭಾಪತಿಗಳ ಸ್ಥಾನಪಲ್ಲಟದ ಬಳಿಕವಷ್ಟೇ ಈ ಕುರಿತ ಸ್ಪಷ್ಟ ಚಿತ್ರಣ ಸಿಗಲಿದೆ.

## ಅವಕಾಶ ದೊರೆತರೆ ನಿಭಾಯಿಸುವೆ

ಮೇಲ್ಮನೆಯ ಸಭಾಪತಿ ಸ್ಥಾನಕ್ಕೆ ಸಾಕಷ್ಟು ಮಂದಿ ನನ್ನ ಹೆಸರು ಸೂಚಿಸಲ್ಪಟ್ಟಿರುವುದು ನನ್ನ ಗಮನಕ್ಕೂ ಬಂದಿದೆ. ಅವಕಾಶ ಸಿಕ್ಕರೆ ಅತ್ಯಂತ ಪ್ರಾಮಾಣಿಕ ಮತ್ತು ನಿಷ್ಪಕ್ಷಪಾತವಾಗಿ ಆ ಜವಾಬ್ದಾರಿಯನ್ನು ನಿರ್ವಹಿಸುತ್ತೇನೆ.

**ಬಸವರಾಜ ಹೊರಟ್ಟಿ**

ಮೇಲ್ಮನೆಯ ಸದಸ್ಯರು